68	Gaibu Shah Dargah, Mallapur
69	Hatal Basha Dargah, Mallapur
70	Idravali Dargah, Hungundi, Sunni
71	Aheyed Dargah, Sunni, Terdal
72	Raje Bagh Savar Dargah Sunni, Mahalingapur
73	Lalsab Dargah Sunni, Mahalingapur

Chief Executive Officer,
Karnataka State Board of Wakfs.

Annexure-II

For the year 2006-2007	NIL		
For the year 2007-08	**Name of the Institution**	**Amount Sanctioned**	**Amount Released**
	Terdal Taj Khan Masjid, Jamkhandi Taluk, Bagalkot	Rs. 2,00,000- (Year 06-07)	Rs. 2,00,000-00
	Taj Khan Masjid, Jamkhandi Taluk, Bagalkot	Rs. 1,00,000-00 (year 07-08)	
For the year 2008-09	Nil		

Chief Executive Officer,
Karnataka State Board of Wakfs.

ಕುಣಬಿ ಮತ್ತು ಗೌಳಿ ಜನಾಂಗವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸುವ ಕುರಿತು

1022 ಶ್ರೀ ಸುನೀಲ್ ವಿ. ಹೆಗಡೆ ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಣಬಿ ಮತ್ತು ಗೌಳಿ ಜನಾಂಗವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸುವ ಪ್ರಸ್ತಾವನೆ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಜನಾಂಗಗಳನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ;

ಇ) ಹಾಗಿದ್ದಲ್ಲಿ, ಎಂದಿನಿಂದ ಈ ಜನಾಂಗಗಳನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸುವುದು?

ಶ್ರೀ ಡಿ. ಸುಧಾಕರ್ (ಸಮಾಜ ಕಲ್ಯಾಣ ಸಚಿವರು):

ಅ) ಕುಣಬಿ ಜನಾಂಗವನ್ನು ಪರಿಶಿಷ್ಟ ಜನಾಂಗಕ್ಕೆ ಸೇರಿಸುವುದರ ಪ್ರಸ್ತಾವನೆ ಮಾತ್ರ ಸರ್ಕಾರದ ಮುಂದೆ ಇರುತ್ತದೆ.

ಆ) ಕುಡುಬಿ, ಕುಣಬಿ ಜನಾಂಗದ ಕುಲಶಾಸ್ತ್ರೀಯ ಅಧ್ಯಯನ ನಡೆಸುವ ಕಾರ್ಯವನ್ನು ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ ಇವರಿಗೆ ವಹಿಸಲಾಗಿದೆ.

ಇ) ಕುಡುಬಿ, ಕುಣಬಿ ಜನಾಂಗದ ಕುಲಶಾಸ್ತ್ರೀಯ ಅಧ್ಯಯನ ವರದಿ ಸ್ವೀಕರಿಸಿದ ನಂತರ ಮುಂದಿನ ಕ್ರಮ ಕೈಗೊಳ್ಳಲಾಗುವುದು.

ಗಂಗಾ ಕಲ್ಯಾಣ ಕಾರ್ಯಕ್ರಮ ಮತ್ತು ಇಲಾಖೆಯಲ್ಲಿ ಖಾಲಿರುವ ಹುದ್ದೆಗಳ ಕುರಿತು

1208 ಶ್ರೀ ತುಕಾರಾಮ್ ಇ. ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಳ್ಳಾರಿ ಜಿಲ್ಲೆಯ ಸಂಡೂರ ತಾಲ್ಲೂಕಿನ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಕ್ಕೆ 2007–08, 2008–09ನೇ ಸಾಲಿನಲ್ಲಿ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಕೊಳವೆ ಬಾವಿ ಕೊರೆಯುವ ಸಂಬಂಧವಾಗಿ ಸರ್ಕಾರ ನಿಗದಿಪಡಿಸಿದ ಗುರಿ ಎಷ್ಟು;

ಆ) ಸರ್ಕಾರದಿಂದ ನಿಗದಿಪಡಿಸಿದ ಗುರಿಯಂತೆ ಫಲಾನುಭವಿಗಳನ್ನು ಆಯ್ಕೆ ಮಾಡಿ ಕೊಳವೆ ಬಾವಿಗಳನ್ನು ಕೊರೆಯಿಸಲಾಗಿದೆಯೇ ಮತ್ತು ಅವುಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿದೆಯೇ; ವಿವರ ನೀಡುವುದು;

ಇ) ವಿದ್ಯುತ್ ಸಂಪರ್ಕ ಕಲ್ಪಿಸದೇ ಇರುವ ಫಲಾನುಭವಿಗಳ ಸಂಖ್ಯೆ ಎಷ್ಟು; ಫಲಾನುಭವಿಗಳ ಹೆಸರು ಮತ್ತು ಇತರೆ ಮಾಹಿತಿಯೊಂದಿಗೆ ವಿವರ ನೀಡುವುದು;

ಈ) ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ವಸತಿ ಶಾಲೆ ಮತ್ತು ಮೆಟ್ರಿಕ್ ಪೂರ್ವ ಮೆಟ್ರಿಕ್ ನಂತರ ವಸತಿ ನಿಲಯಗಳಲ್ಲಿ